ತೀರ್ಥಹಳ್ಳಿ ಕ್ಷೇತ್ರದಲ್ಲಿರುವ ಸರ್ಕಾರಿ ಕಿರಿಯ ಪದವಿಪೂರ್ವ ಕಾಲೇಜು ಕಟ್ಟಡ ನಿರ್ಮಾಣ

3504(3503) ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸರ್ಕಾರಿ ಕಿರಿಯ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಕಟ್ಟಡ ಇಲ್ಲದಿರುವ ಕಾಲೇಜುಗಳ ಸಂಖ್ಯೆ ಎಷ್ಟು;

ಆ) ತೀರ್ಥಹಳ್ಳಿಯ ಸರ್ಕಾರಿ ಕಿರಿಯ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ತರಗತಿವಾರು ವಿವರ ನೀಡುವುದು)

ಇ) ಈ ಕಾಲೇಜಿನಲ್ಲಿ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಕಟ್ಟಡ, ಉಪನ್ಯಾಸಕರು ಮತ್ತು ಪ್ರಯೋಗಾಲಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಈ ಕೊರತೆಯನ್ನು ಸರಿದೂಗಿಸಲು ಏನು ಕ್ರಮ ಕೈಗೊಳ್ಳಲಾಗಿದೆ;

ಈ) ತೀರ್ಥಹಳ್ಳಿ ಕ್ಷೇತ್ರ ವ್ಯಾಪ್ತಿಗೆ ಬರುವ ಹೊಸ ನಗರ ತಾಲ್ಲೂಕು ಮಾಸ್ತಿಕಟ್ಟೆ ಸರ್ಕಾರಿ ಕಿರಿಯ ಕಾಲೇಜಿಗೆ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಉ) ಈ ಸಾಲಿನಲ್ಲಿ ಕಟ್ಟಡ ನಿರ್ಮಾಣಕ್ಕೆ ಹಣ ನಿಗದಿಪಡಿಸಲಾಗಿದೆಯೇ; ನಿಗದಿಪಡಿಸಿದಲ್ಲಿ ಯಾವಾಗ ಒದಗಿಸಲಾಗುವುದು?

ಪ್ರೊ॥ ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು):

ಅ) 684

ಬಹುತೇಕ ಕಾಲೇಜುಗಳು ಸ್ವಂತ ಕಟ್ಟಡವನ್ನು ಹೊಂದಿರುವುದಿಲ್ಲ.

ಆ) ಒಟ್ಟು 808

ಕ್ರಮಗಳು	ಪ್ರಥಮ ಪಿ.ಯು.ಸಿ.	ದ್ವಿತೀಯ ಪಿ.ಯು.ಸಿ.
ಕಲಾ	246	245
ವಿಜ್ಞಾನ	115	103
ವಾಣಿಜ್ಯ	49	50
ಒಟ್ಟು	**410**	**398**

ಇ) ಬಂದಿದೆ.

ಈ ಕಾಲೇಜಿನಲ್ಲಿ 8 ಕೊಠಡಿಗಳಿದ್ದು ಹೆಚ್ಚುವರಿಯಾಗಿ 7 ಕೊಠಡಿಗಳ ಅವಶ್ಯಕತೆಯಿದ್ದು ಅದರಲ್ಲಿ 2002–03ನೇ ಸಾಲಿಗೆ 1 ಕೊಠಡಿ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡಲಾಗಿದೆ.

ಈ ಕಾಲೇಜಿನಲ್ಲಿ 2 ಉಪನ್ಯಾಸಕರ ಹುದ್ದೆಗಳು ಖಾಲಿ ಇದ್ದು ಇದನ್ನು ಹತ್ತಿರದ ಕಡಿಮೆ ಕಾರ್ಯಭಾರವಿರುವ ಕಾಲೇಜಿನಿಂದ ಉಪನ್ಯಾಸಕರನ್ನು ನಿಯೋಜನೆ ಮಾಡಲಾಗಿದೆ.

ಸದರಿ ಕಾಲೇಜಿಗೆ ಪ್ರಯೋಗಾಲಯವನ್ನು ಅಭಿವೃದ್ಧಿ ಪಡಿಸಲು 1998–99 ರಿಂದ 2002–03ನೇ ಸಾಲಿನವರೆಗೆ ಒಟ್ಟು ರೂ. 90,000.00 ಗಳನ್ನು ಬಿಡುಗಡೆ ಮಾಡಲಾಗಿದೆ.

ಈ) ಬಂದಿದೆ.

ಉ) ಆರ್ಥಿಕ ಲಭ್ಯತೆಯನ್ನು ಆಧರಿಸಿ ಅನುದಾನ ಒದಗಿಸಲು ಕ್ರಮ ಕೈಗೊಳ್ಳಲಾಗುವುದು.